ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 356 (2471)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ವಿಷಯ : ಲೋಕೋಪಯೋಗಿ ಇಲಾಖೆಯಲ್ಲಿ ವಿದ್ಯುತ್ ಸಂಬಂಧಿಸಿದ ಕಾಮಗಾರಿಗಳ ಬಗ್ಗೆ

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಪ್ರತಿ ವರ್ಷ ವಿದ್ಯುತ್ ಸಂಬಂಧಿತ ಕಾಮಗಾರಿಗಳಿಗೆ ಖರ್ಚು ಮಾಡಲಾಗುತ್ತಿರುವ ಹಣ ಎಷ್ಟು; (ಕಳೆದ 3 ವರ್ಷಗಳ ಮಾಹಿತಿ ಒದಗಿಸುವುದು)

(ಆ) ಸದರಿ ಕಾಮಗಾರಿಗಳನ್ನು ನಿರ್ವಹಿಸಲು ಯಾವ ಇಲಾಖೆಗಳಿಂದ ಯಾವ ದರ್ಜೆಯ ಅಧಿಕಾರಿಗಳನ್ನು ಎರವಲು ಸೇವೆ ಪಡೆಯಲಾಗಿದೆ; ಇವರಿಗೆ ಇಲಾಖೆ ನೀಡುತ್ತಿರುವ ಸಂಬಳದ ಪ್ರಮಾಣವೇನು;

(ಇ) ಲೋಕೋಪಯೋಗಿ ಇಲಾಖೆ ಎಷ್ಟು ಮಂದಿ ಯಾವ ದರ್ಜೆಯ ವಿದ್ಯುತ್ ಇಂಜಿನಿಯರ್‌ಗಳನ್ನು ಹೊಂದಿದೆ;

(ಈ) ಇಲಾಖೆಗೆ ವಿದ್ಯುತ್ ಕಾಮಗಾರಿ ನಿರ್ವಹಿಸಲು ಎಷ್ಟು ಮಂದಿ ಹಾಗೂ ಯಾವ ದರ್ಜೆಯ ಸಿಬ್ಬಂದಿಗಳ ಅಗತ್ಯವಿದೆ; (ಅಂಕಿ-ಅಂಶ ಒದಗಿಸುವುದು)

(ಉ) ಇಲಾಖೆಯ ವಿದ್ಯುತ್ ಕಾಮಗಾರಿ ನಿರ್ವಹಿಸಲು ಅಗತ್ಯ ಪೂರ್ಣ ಸಿಬ್ಬಂದಿ ನೇಮಕಾತಿ ಮಾಡಿಕೊಳ್ಳಲು ಇರುವ ಸಮಸ್ಯೆಗಳೇನು;

(ಊ) ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ಕೈಗೊಳ್ಳಲಾಗುವುದು?